THE NEW
INDIAN
EXPRESS

THURSDAY 19.05.2022

## CME held at KMC

Udupi: Department of Surgical Oncology, Kasturba Medical College and Hospital, Manipal organised a CME on Multi-Disciplinary Approach to Pancreatic Cancer recently. Dr Umesh Mahantshetty, Director, Homi Bhabha Cancer Hospital and Research Center, Vishakapatnam speaking on the occasion said that Manipal Comprehensive Cancer Care Center at Kasturba Hospital, Manipal is far ahead in management of pancreatic cancer in the Coastal Karnataka region and is one of the apex centers in the country.

ಕನ್ನಡಪ್ರಭ
ಗುರುವಾರ 19.5.2022
ಮಂಗಳೂರು

# ಕೆಎಂಸಿ: ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ಉದ್ಘಾಟನೆ



ಮಣಿಪಾಲ ಕೆಎಂಸಿಯಲ್ಲಿ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ಉದ್ಘಾಟನೆಗೊಂಡಿತು.

• **ಕನ್ನಡಪ್ರಭ ವಾರ್ತೆ** ಮಣಿಪಾಲ

ಇಲ್ಲಿನ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪನ್ನು ಇತ್ತೀಚೆಗೆ ಉದ್ಘಾಟಿಸಲಾಯಿತು. ಇದೇ ಸಂದರ್ಭದಲ್ಲಿ ಮೆದೋಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಬಹುಶಿಸ್ತಿನ ಚಿಕಿತ್ಸೆಯ ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮವ ನಡೆಸಲಾಯಿತು.

ವಿಶಾಖಪಟ್ಟಣದ ಹೋಮಿಬಾಬಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಡಾ. ಉಮೇಶ್ ಮಹಾಂತ ಶೆಟ್ಟಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ, ಮುಂಬೈಯ ಟಾಟಾ ಮೆಮೋರಿಯಲ್ ಆಸ್ಪತ್ರೆಯು 2008ರಲ್ಲಿ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಇಂಡಿಯಾ ಎನ್ನುವ ಬೆಂಬಲ ಗುಂಪುಗಳನ್ನು ಪ್ರಾರಂಭಿಸಿತು. ಇದು ಮೆದೋಜೀರಕ ಗ್ರಂಥಿಯ ಕ್ಯಾನ್ಸರ್‌ಗಳ ಬಗ್ಗೆ ಅರಿವು ಮೂಡಿಸಲು, ಬೆಂಬಲ ಚಟುವಟಿಕೆಗಳನ್ನು ನಡೆಸಲು ಸಹಾಯ ಮಾಡುತ್ತಿದೆ ಎಂದು ಹೇಳಿದರು.

ಮಾಹೆ ಉಪಕುಲಪತಿ ಲೆ. ಜನರಲ್ (ಡಾ) ಎಂ.ಡಿ. ವೆಂಕಟೇಶ್ ಮಾತನಾಡಿ, ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ದೇಶದ ಶ್ರೇಷ್ಠ ಕ್ಯಾನ್ಸರ್ ಕೇಂದ್ರವಾಗುವ ಹಾದಿಯಲ್ಲಿದೆ ಎಂದು ಸಂತಸ ವ್ಯಕ್ತಪಡಿಸಿದರು. ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್ ಸ್ವಾಗತಿಸಿದರು. ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ವಂದಿಸಿದರು. ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ. ನವೀನ ಕುಮಾರ್ ಅವರು ಬೆಂಬಲ ಗುಂಪು, ಸಿಎಂಇ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿಜಯವಾಣಿ
VIJAYAVANI » MANGALURU
ಗುರುವಾರ 19 ಮೇ 2022
19 MAY 2022

## ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ಉದ್ಘಾಟಿಸಿ ಡಾ. ಉಮೇಶ್ ಮಹಾಂತ ಶೆಟ್ಟಿ ವಿಶ್ಲೇಷಣೆ

# ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆ ದೇಶದ ಅಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರ

ವಿಜಯವಾಣಿ ಸುದ್ದಿಜಾಲ ಉಡುಪಿ

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕರಾವಳಿ ಕರ್ನಾಟಕ ಭಾಗದಲ್ಲಿ ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ನಿರ್ವಹಣೆಯಲ್ಲಿ ಮುಂಚೂಣಿಯಲ್ಲಿದ್ದು , ದೇಶದ ಅಗ್ರ ಕ್ಯಾನ್ಸರ್ ಕೇಂದ್ರಗಳಲ್ಲಿ ಒಂದಾಗಿದೆ ಎಂದು ವಿಶಾಖಪಟ್ಟಣದ ಹೋಮಿಭಾಭಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ನಿರ್ದೇಶಕ ಡಾ.ಉಮೇಶ್ ಮಹಾಂತಶೆಟ್ಟಿ ಹೇಳಿದರು.

ಕೆಎಂಸಿ ಆಸ್ಪತ್ರೆ, ಮಾಹೆ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗ ವತಿಯಿಂದ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ಮತ್ತು ಮೇದೋಜೀರಕ ಗ್ರಂಥಿಗೆ ಸಂಬಂಧಿಸಿದ ಬಹು ಶಿಸ್ತಿನ ಚಿಕಿತ್ಸಾ ವಿಧಾನದ ಕುರಿತ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮುಂಬೈ ಟಾಟಾ ಮೆಮೋರಿಯಲ್ ಆಸ್ಪತ್ರೆ 2008ರಲ್ಲಿ ಮೇದೋಜೀರಕ ಗ್ರಂಥಿಗೆ ಸಂಬಂದಿಸಿದ ಕ್ಯಾನ್ಸರ್‌ಗಳಿಗೆ ಚಿಕಿತ್ಸೆ ನೀಡಲು, ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ನಿರ್ವಹಣೆಯನ್ನು ಕೇಂದ್ರೀಕರಿಸಲು ಪ್ರತ್ಯೇಕ ವಿಭಾಗವನ್ನೇ ಪ್ರಾರಂಭಿಸಿದ್ದು, ಮೇದೋಜೀರಕ ಗ್ರಂಥಿಯ ಕ್ಯಾನ್ಸರ್‌ಗಳ ಕುರಿತ ಅರಿವು ಮೂಡಿಸಲು ಸಹಕಾರಿ ಎಂದರು.

ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್‌ಎಂ.ಡಿ ವೆಂಕಟೇಶ್ ಮಾತನಾಡಿ, ಭಾರತದಲ್ಲಿ ಪ್ರತಿ ವರ್ಷ 10,000ಕ್ಕೂ ಹೆಚ್ಚು ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ಪ್ರಕರಣ ಪತ್ತೆಯಾಗುತ್ತಿವೆ. ಅವುಗಳಲ್ಲಿ ಶೇ. 10ರಿಂದ 20ರಷ್ಟು ಮಾತ್ರ ಶಸ್ತ್ರಚಿಕಿತ್ಸೆಯಿಂದ ಗುಣಪಡಿಸಬಹುದಾಗಿದೆ. ಆದಾಗ್ಯೂ ಸುಧಾರಿತ ವಿಕಿರಣ ಚಿಕಿತ್ಸೆಯ ತಂತ್ರಗಳೊಂದಿಗೆ ಹೆಚ್ಚು ಪ್ರಕರಣಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿದೆ. 10 ವರ್ಷಗಳ ಹಿಂದೆ ಮೇದೋಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಉಪಶಮನಕಾರಿ ಔಷಧಿ ಬಳಸಲಾಗುತ್ತಿತ್ತು. ಈಗ ಸುಧಾರಿತ ಕಿಮೋಥೆರಪಿ ಮತ್ತು ವಿಕಿರಣ ಚಿಕಿತ್ಸಾ ತಂತ್ರಗಳು ಫಲಿತಾಂಶಗಳನ್ನು ಸುಧಾರಿಸಿದೆ ಎಂದರು.

ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ನವೀನ ಕುಮಾರ್ ಮಾಹಿತಿ ನೀಡಿದರು. ಕೆಎಂಸಿ ಡೀನ್ ಡಾ.ಶರತ್ ಕುಮಾರ್ ರಾವ್ ಸ್ವಾಗತಿಸಿ, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ವಂದಿಸಿದರು.



**ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಡಾ.ಉಮೇಶ್ ಮಹಾಂತಶೆಟ್ಟಿ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ಉದ್ಘಾಟಿಸಿದರು. ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್‌ಎಂ.ಡಿ ವೆಂಕಟೇಶ್, ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ನವೀನ ಕುಮಾರ್ ಮೊದಲಾದವರಿದ್ದರು.**

ಪ್ರಜಾವಾಣಿ
ಗುರುವಾರ • ಮೇ 19, 2022

# 'ಕ್ಯಾನ್ಸರ್‌ಗೆ ಬಹುಶಿಸ್ತಿನ ಚಿಕಿತ್ಸೆ ಲಭ್ಯ'

## ಕೆಎಂಸಿಯಲ್ಲಿ ವೈದ್ಯಕೀಯ ಶಿಕ್ಷಣ, ಮೆದೋಜೀರಕ ಗ್ರಂಥಿ ರೋಗಕ್ಕೆ ಚಿಕಿತ್ಸೆ

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಕಸ್ತೂರಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದಲ್ಲಿ ಬುಧವಾರ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್‌ನ ಉದ್ಘಾಟನೆ ಹಾಗೂ ಮೆದೋಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್‌ಗೆ ಬಹುಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ನಡೆಯಿತು.

ವಿಶಾಖಪಟ್ಟಣದ ಹೋಮಿಬಾಬಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಡಾ.ಉಮೇಶ್ ಮಹಾಂತಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಸ್ತೂರಬಾ ಆಸ್ಪತ್ರೆ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕರಾವಳಿ ಕರ್ನಾಟಕದಲ್ಲಿ ಮೆದೋಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ನಿರ್ವಹಣೆಯಲ್ಲಿ ಮುಂಚೂಣಿಯಲ್ಲಿದೆ. ದೇಶದ ಅಗ್ರ ಕ್ಯಾನ್ಸರ್ ಕೇಂದ್ರಗಳಲ್ಲಿ ಒಂದಾಗಿದೆ ಎಂದರು. ಮುಂಬೈನ ಟಾಟಾ ಮೆಮೋರಿಯಲ್ ಆಸ್ಪತ್ರೆ 2008ರಲ್ಲಿ ಪ್ಯಾಂಕ್ರಿ ಯಾಟಿಕ್ ಕ್ಯಾನ್ಸರ್ ಇಂಡಿಯಾ (pancreaticcancerindia.com) ವೆಬ್‌ಸೈಟ್ ಆರಂಭಿಸುವ ಮೂಲಕ ಮೆದೋಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್ ರೋಗಗಳಿಗೆ ಚಿಕಿತ್ಸೆ ನೀಡಲು ಹಾಗೂ ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ನಿರ್ವಹಣೆ ಕೇಂದ್ರೀಕರಿಸಲು, ರೋಗದ ಬಗ್ಗೆ ಅರಿವು ಮೂಡಿಸಲು ನೆರವು ನೀಡುತ್ತಿದೆ ಎಂದರು.



ಮಣಿಪಾಲದ ಕಸ್ತೂರಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದಲ್ಲಿ ಬುಧವಾರ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್‌ನ ಉದ್ಘಾಟನೆ ಹಾಗೂ ಮೆದೋಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್‌ಗೆ ಬಹುಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ನಡೆಯಿತು.

ಮಾಹೆ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ ಎಂ.ಡಿ. ವೆಂಕಟೇಶ್ ಮಾತನಾಡಿ, 'ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕಳೆದ ಐದು ವರ್ಷಗಳಲ್ಲಿ ಸಮರ್ಥ ಕ್ಯಾನ್ಸರ್ ಶಸ್ತ್ರ ಚಿಕಿತ್ಸಕರು, ರೇಡಿಯೋಥೆರಪಿಸ್ಟ್, ಆಂಕಾಲಜಿಸ್ಟ್, ವೈದ್ಯಕೀಯ ಆಂಕಾಲಜಿಸ್ಟ್, ಉಪಶಾಮಕ ಔಷಧಿಗಳ ತಜ್ಞರೊಂದಿಗೆ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ.

ವಿಶೇಷ ತಜ್ಞ ಶುಶ್ರೂಷಾ ಆರೈಕೆ ಸೇವೆ ಸಹ ಲಭ್ಯವಿದ್ದು, ದೇಶದ ಶ್ರೇಷ್ಠ ಕ್ಯಾನ್ಸರ್ ಕೇಂದ್ರವಾಗುವ ಹಾದಿಯಲ್ಲಿ ಮಣಿಪಾಲ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರ ದಾಪುಗಾಲಿಟ್ಟಿದೆ. ದೇಶದಲ್ಲಿ ಪ್ರತಿ ವರ್ಷ 10,000ಕ್ಕೂ ಹೆಚ್ಚು ಮಂದಿಯಲ್ಲಿ ಮೆದೋಜೀರಕ ಗ್ರಂಥಿಯ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿವೆ. ಶೇ 10 ರಿಂದ 20 ರಷ್ಟು ಮಾತ್ರ ಶಸ್ತ್ರಚಿಕಿತ್ಸೆಯಿಂದ ಗುಣಪಡಿಸಬಹುದಾಗಿದೆ. ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆ ಮತ್ತು ಸುಧಾರಿತ ವಿಕಿರಣ ಚಿಕಿತ್ಸೆಯ ತಂತ್ರಗಳೊಂದಿಗೆ ರೋಗವನ್ನು ಗುಣಪಡಿಸಲು ಸಾಧ್ಯವಾಗುತ್ತಿದೆ ಎಂದರು. ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆ, ಸುಧಾರಿತ ಕೀಮೋಥೆರಪಿ ವಿಧಾನ, ವಿಕಿರಣ ಚಿಕಿತ್ಸೆಯು ಮೆದೋಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ಫಲಿತಾಂಶವನ್ನು ಸುಧಾರಿಸಿವೆ ಎಂದರು.

ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್ ಸ್ವಾಗತಿಸಿದರು. ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ವಂದಿಸಿದರು. ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ನವೀನ ಕುಮಾರ್ ಪ್ಯಾಂಕ್ರಿಯಾಟಿಕ್ ಸಪೋರ್ಟ್ ಗ್ರೂಪ್ ಮತ್ತು ಮೆದೋಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಬಹು-ಶಿಸ್ತಿನ ವಿಧಾನದ ಸಿಎಂಇ ಕುರಿತು ಅವಲೋಕನ ನೀಡಿದರು.

### ಮುಖ್ಯಾಂಶಗಳು

- 10 ವರ್ಷಗಳ ಹಿಂದೆ ಮೆದೋಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಔಷಧಿ
- ಕ್ಯಾನ್ಸರ್ ನಿರ್ವಹಣೆ ಕೇಂದ್ರೀಕರಿಸಲು, ರೋಗದ ಬಗ್ಗೆ ಅರಿವು
- ಶೇ 10 ರಿಂದ 20 ರಷ್ಟು ಮಾತ್ರ ಶಸ್ತ್ರಚಿಕಿತ್ಸೆಯಿಂದ ಗುಣಪಡಿಸಬಹುದು

ಉದಯವಾಣಿ
ಸುದಿನ

ಮಣಿಪಾಲ
2022
ಮೇ 19 | ಗುರುವಾರ

# ಮೇದೋಜ್ಜೀರಕ ಗ್ರಂಥಿ ಕ್ಯಾನ್ಸರ್‌ಗೆ ಚಿಕಿತ್ಸೆ: ಸಿಎಂಇ



**ಮಣಿಪಾಲ, ಮೇ 18:** ಇಲ್ಲಿನ ಕೆಎಂಸಿ ಮತ್ತು ಆಸ್ಪತ್ರೆಯ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ವತಿಯಿಂದ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್‌ನ ಉದ್ಘಾಟನೆ ಮತ್ತು ಮೇದೋಜ್ಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್‌ಗೆ ಬಹು ಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ (ಸಿಎಂಇ) ಕಾರ್ಯಕ್ರಮ ನಡೆಯಿತು.

ಉದ್ಘಾಟನೆ ನೆರವೇರಿಸಿದ ವಿಶಾಖ ಪಟ್ಟಣದ ಹೋಮಿಬಾಬಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ನಿರ್ದೇಶಕ ಡಾ| ಉಮೇಶ್ ಮಹಾಂತ ಶೆಟ್ಟಿ ಮಾತನಾಡಿ, ಕಸ್ತೂರ್ಬಾ ಆಸ್ಪತ್ರೆಯ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕರಾವಳಿ ಕರ್ನಾಟಕ ಭಾಗದಲ್ಲಿ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ನಿರ್ವಹಣೆಯಲ್ಲಿ ಮುಂಚೂಣಿಯಲ್ಲಿದ್ದು ದೇಶದ ಅಗ್ರ ಕ್ಯಾನ್ಸರ್ ಕೇಂದ್ರಗಳಲ್ಲಿ ಒಂದಾಗಿದೆ ಎಂದು ತಿಳಿಸಿದರು.

ಮಾಹೆ ಕುಲಪತಿ ಲೆ| ಜ| ಡಾ| ಎಂ.ಡಿ. ವೆಂಕಟೇಶ್ ಮಾತನಾಡಿ, ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕಳೆದೈದು ವರ್ಷಗಳಲ್ಲಿ ಅತ್ಯಂತ ಸಮರ್ಥ ಕ್ಯಾನ್ಸರ್ ಶಸ್ತ್ರಚಿಕಿತ್ಸಕರು, ರೇಡಿಯೋ ಥೆರಪಿ ಅಂಕೊಲಾಜಿಸ್ಟ್, ವೈದ್ಯಕೀಯ ಅಂಕೊಲಾಜಿಸ್ಟ್, ಉಪಶಾಮಕ ಔಷಧಗಳ ತಜ್ಞರೊಂದಿಗೆ ಸಮಗ್ರವಾಗಿದೆ. ಅಲ್ಲದೆ ಕೇಂದ್ರದಲ್ಲಿ ವಿಶೇಷ ತಜ್ಞ ಶುಶ್ರೂಷಾ ಆರೈಕೆಯನ್ನು ಒದಗಿಸಲಾಗುತ್ತಿದೆ. 2

## ಮೇದೋಜ್ಜೀರಕ ಗ್ರಂಥಿ ಕ್ಯಾನ್ಸರ್‌ಗೆ ಚಿಕಿತ್ಸೆ: ಸಿಎಂಇ

(ಒಂದನೇ ಪುಟದಿಂದ)

ಕೇಂದ್ರವು ದೇಶದ ಶ್ರೇಷ್ಠ ಕ್ಯಾನ್ಸರ್ ಕೇಂದ್ರವಾಗುವ ಹಾದಿಯಲ್ಲಿದೆ. ಭಾರತದಲ್ಲಿ ಪ್ರತಿವರ್ಷ 10,000ಕ್ಕೂ ಹೆಚ್ಚು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿವೆ. ಅವುಗಳಲ್ಲಿ ಶೇ.10ರಿಂದ 20ರಷ್ಟು ಮಾತ್ರ ಶಸ್ತ್ರಚಿಕಿತ್ಸೆಯಿಂದ ಗುಣಪಡಿಸಬಹುದು. ಆದಾಗ್ಯೂ ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳು ಮತ್ತು ಸುಧಾರಿತ ವಿಕಿರಣ ಚಿಕಿತ್ಸೆಯ ತಂತ್ರಗಳೊಂದಿಗೆ ಹೆಚ್ಚು ಹೆಚ್ಚು ಪ್ರಕರಣಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿದೆ. 10 ವರ್ಷಗಳ ಹಿಂದೆ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಹೆಚ್ಚಾಗಿ ಉಪಶಮನಕಾರಿ ಔಷಧವನ್ನು ಬಳಸಲಾಗುತ್ತಿತ್ತು. ಆದಾಗ್ಯೂ ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳೊಂದಿಗೆ, ಸುಧಾರಿತ ಕೀಮೋಥೆರಪಿ, ವಿಕಿರಣ ಚಿಕಿತ್ಸೆಯ ತಂತ್ರಗಳು ಮತ್ತು ಕ್ಯಾನ್ಸರ್ ಆರೈಕೆಯ ಪುರಾವೆ ಆಧಾರಿತ ಅಭ್ಯಾಸವು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ಫಲಿತಾಂಶಗಳನ್ನು ಸುಧಾರಿಸಿದೆ ಎಂದರು.

ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ| ನವೀನ್ ಕುಮಾರ್ ಅವರು, ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದಲ್ಲಿ ನಡೆಸಲಾಗುತ್ತಿರುವ ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆಗಳು ಸೇರಿದಂತೆ ಎಲ್ಲ ರೀತಿಯ ಪ್ರಮುಖ ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಸಂಬಂಧಿಸಿದ ಶಸ್ತ್ರಚಿಕಿತ್ಸೆಗಳನ್ನು ನಡೆಸಲಾಗುತ್ತಿದೆ. ಈ ಹೊಸ ಉಪಕ್ರಮವು ಹೊಸದಾಗಿ ಪತ್ತೆಯಾದ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ರೋಗಿಗೆ ರೋಗ ನಿರ್ಣಯದಿಂದ ಹಿಡಿದು ಯಶಸ್ವೀ ಚಿಕಿತ್ಸೆಯ ಮೂಲಕ ಸಾಮಾನ್ಯ ಜೀವನವನ್ನು ನಡೆಸಲು ಸಹಾಯ ಮಾಡುತ್ತದೆ ಎಂದರು.

ಕೆಎಂಸಿ ಡೀನ್ ಡಾ| ಶರತ್ ಕುಮಾರ್ ರಾವ್ ಸ್ವಾಗತಿಸಿ, ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ವಂದಿಸಿದರು.

THE TIMES OF INDIA, MANGALURU
THURSDAY, MAY 19, 2022

# Pancreatic cancer support group inaugurated

TIMES NEWS NETWORK

**Mangaluru:** Department of surgical oncology, Kasturba Medical College and Hospital, Manipal, inaugurated the Pancreatic Cancer Support Group, and organised a CME on multi-disciplinary approach to pancreatic cancer on Wednesday.

The programme was inaugurated by Dr Umesh Mahant Shetty, director, Homi Bhabha Cancer Hospital and Research Centre, Vishakapatnam. He said that Manipal Comprehensive Cancer Care Centre at Kasturba Hospital, is far ahead in the management of pancreatic cancer in the region, and is one of the apex centres in this country.

He also said that Tata Memorial Hospital Mumbai launched pancreaticcancerindia.com in 2008, which helped in treating pancreatic cancers, centralising pancreatic cancer management, and disseminating knowledge about pancreatic cancers, and to carry out activities like pancreatic cancer support group.

Lt. Gen. (Dr) M D Venkatesh, vice-chancellor, MAHE, Manipal, said that Manipal Comprehensive Cancer Care Centre has grown exponentially over the last five years, with extremely competent cancer surgeons, radiation oncologist, medical oncologists, palliative medicine specialists, and specialised nursing care, and the centre is on the way to become a Center of Excellence in the country. In India, each year, over 10,000 new cases of pancreatic cancers are diagnosed, out of which only 10% to 20% of them are surgically curable. However, with the refinements in the surgical techniques, improved chemotherapy and radiation therapy techniques, and evidence-based practice of cancer care, have improved the outcomes.

Dr Naveena Kumar A N, head-department of surgical oncology, gave an overview on pancreatic support group, and said all types of major and supra major pancreatic cancer surgeries, including vascular resections and laparoscopic surgeries are being performed in the department. This new initiative will help the newly diagnosed pancreatic cancer patient from the diagnosis, through cancer treatment to beyond the treatment to lead a normal life.

# ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ಮತ್ತು ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್‌ಗೆ ಬಹುಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮದ ಉದ್ಘಾಟನೆ

By Udupi Bulletin News Desk - May 18, 2022 0




**ಮಣಿಪಾಲ:** ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಮಾಹೆ ಮಣಿಪಾಲದ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ವತಿಯಿಂದ ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ನ ಉದ್ಘಾಟನೆ ಮತ್ತು ಮೇದೋಜ್ಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್‌ಗೆ ಬಹುಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾದ ವಿಶಾಖಪಟ್ಟಣದ ಹೋಮಿಭಾಭಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಡಾ.ಉಮೇಶ್ ಮಹಾಂತಶೆಟ್ಟಿ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕರಾವಳಿ ಕರ್ನಾಟಕ ಭಾಗದಲ್ಲಿ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ನಿರ್ವಹಣೆಯಲ್ಲಿ ಮುಂಚೂಣಿಯಲ್ಲಿದ್ದು, ದೇಶದ ಅಗ್ರ ಕ್ಯಾನ್ಸರ್ ಕೇಂದ್ರಗಳಲ್ಲಿ ಒಂದಾಗಿದೆ.

ಟಾಟಾ ಮೆಮೋರಿಯಲ್ ಆಸ್ಪತ್ರೆ ಮುಂಬೈ 2008 ರಲ್ಲಿ pancreaticcancerindia.com ಅನ್ನು ಪ್ರಾರಂಭಿಸಿತು. ಇದು ಮೇದೋಜ್ಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್‌ಗಳಿಗೆ ಚಿಕಿತ್ಸೆ ನೀಡಲು, ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ನಿರ್ವಹಣೆಯನ್ನು ಕೇಂದ್ರೀಕರಿಸಲು ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್‌ಗಳ ಕುರಿತು ಅರಿವು ಮೂಡಿಸಲು ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಬೆಂಬಲ ಗುಂಪಿನ ಚಟುವಟಿಕೆಗಳನ್ನು ನಡೆಸಲು ಸಹಾಯ ಮಾಡಿತು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗೌರವ ಅತಿಥಿಗಳಾಗಿದ್ದ ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಮಾತನಾಡಿ, ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕಳೆದ ಐದು ವರ್ಷಗಳಲ್ಲಿ ಅತ್ಯಂತ ಸಮರ್ಥ ಕ್ಯಾನ್ಸರ್ ಶಸ್ತ್ರಚಿಕಿತ್ಸಕರು, ರೇಡಿಯೋಥೆರಪಿ ಆಂಕೊಲಾಜಿಸ್ಟ್, ವೈದ್ಯಕೀಯ ಆಂಕೊಲಾಜಿಸ್ಟ್, ಉಪಶಾಮಕ ಔಷಧಿಗಳ ತಜ್ಞರೊಂದಿಗೆ ಸಮಗ್ರವಾಗಿದೆ. ಅಲ್ಲದೇ ಕೇಂದ್ರದಲ್ಲಿ ವಿಶೇಷ ತಜ್ಞ ಶುಶ್ರೂಷಾ ಆರೈಕೆಯನ್ನು ಒದಗಿಸಲಾಗುತ್ತಿದೆ ಮತ್ತು ಕೇಂದ್ರವು ದೇಶದ ಶ್ರೇಷ್ಠ ಕ್ಯಾನ್ಸರ್ ಕೇಂದ್ರವಾಗುವ ಹಾದಿಯಲ್ಲಿದೆ.

ಭಾರತದಲ್ಲಿ ಪ್ರತಿ ವರ್ಷ 10000 ಕ್ಕೂ ಹೆಚ್ಚು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿವೆ. ಅವುಗಳಲ್ಲಿ ಶೇಕಡಾ 10 ರಿಂದ 20 ರಷ್ಟು ಮಾತ್ರ ಶಸ್ತ್ರಚಿಕಿತ್ಸೆಯಿಂದ ಗುಣಪಡಿಸಬಹುದಾಗಿದೆ. ಆದಾಗ್ಯೂ ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳು ಮತ್ತು ಸುಧಾರಿತ ವಿಕಿರಣ ಚಿಕಿತ್ಸೆಯ ತಂತ್ರಗಳೊಂದಿಗೆ ಹೆಚ್ಚು ಹೆಚ್ಚು ಪ್ರಕರಣಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿದೆ.

10 ವರ್ಷಗಳ ಹಿಂದೆ ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ಗೆ ಹೆಚ್ಚಾಗಿ ಉಪಶಮನಕಾರಿ ಔಷಧಿಯನ್ನು ಬಳಸಲಾಗುತಿತ್ತು. ಆದಾಗ್ಯೂ, ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳೊಂದಿಗೆ, ಸುಧಾರಿತ ಕೀಮೋಥೆರಪಿ ಮತ್ತು ವಿಕಿರಣ ಚಿಕಿತ್ಸೆಯ ತಂತ್ರಗಳು ಮತ್ತು ಕ್ಯಾನ್ಸರ್ ಆರೈಕೆಯ ಪುರಾವೆ ಆಧಾರಿತ ಅಭ್ಯಾಸವು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ಫಲಿತಾಂಶಗಳನ್ನು ಸುಧಾರಿಸಿದೆ ಎಂದರು.

ಕೆಎಂಸಿ ಡೀನ್ ಡಾ. ಶರತ್ ಕುಮಾರ್ ರಾವ್ ಸ್ವಾಗತಿಸಿ, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ವಂದಿಸಿದರು. ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ. ನವೀನ ಕುಮಾರ್ ಅವರು ಪ್ಯಾಂಕ್ರಿಯಾಟಿಕ್ ಸಪೋರ್ಟ್ ಗ್ರೂಪ್ ಮತ್ತು ಮೇದೋಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಬಹುಶಿಸ್ತಿನ ವಿಧಾನದ ಸಿಎಂಇ ಕುರಿತು ಅವಲೋಕನವನ್ನು ನೀಡಿ, ಕ್ಯಾನ್ಸರ್ ಶಸ್ತ್ರ ಚಿಕಿತ್ಸಾ ವಿಭಾಗದಲ್ಲಿ ನಡೆಸಲಾಗುತ್ತಿರುವ ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆಗಳು ಸೇರಿದಂತೆ ಎಲ್ಲಾ ರೀತಿಯ ಪ್ರಮುಖ ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಗೆ ಸಂಭಂದಿಸಿದ ಶಸ್ತ್ರಚಿಕಿತ್ಸೆಗಳನ್ನು ನಡೆಸಲಾಗುತ್ತಿದೆ.

ಈ ಹೊಸ ಉಪಕ್ರಮವು ಹೊಸದಾಗಿ ಪತ್ತೆಯಾದ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ರೋಗಿಗೆ ರೋಗನಿರ್ಣಯದಿಂದ ಹಿಡಿದು ಯಶಸ್ವಿ ಚಿಕಿತ್ಸೆಯ ಮೂಲಕ ಸಾಮಾನ್ಯ ಜೀವನವನ್ನು ನಡೆಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

THE CANARA POST

# Kasturba Medical College and Hospital inaugurates Pancreatic Cancer Support Group

## *CME on Multi-Disciplinary Approach to Pancreatic Cancer held*



**Manipal, May 18, 2022:** Department of Surgical Oncology of Kasturba Medical College and Hospital inaugurated Pancreatic Cancer Support Group and organized a CME on Multi-Disciplinary Approach to Pancreatic Cancer.

The program was inaugurated by Dr Umesh Mahantshetty, Director, Homi Bhabha Cancer Hospital and Research Center, Vishakapatnam.

"Manipal Comprehensive Cancer Care Center at Kasturba Hospital, Manipal is far ahead in management of pancreatic cancer in the coastal Karnataka. It is one of the apex centers in the country," he said.

"Tata Memorial Hospital Mumbai launched pancreaticcancerindia.com in 2008, which helped in treating the pancreatic cancers, centralizing pancreatic cancer management and disseminating the knowledge about pancreatic cancers and to carry on activities like pancreatic cancer support group," he added.

Lt. Gen. (Dr) M D Venkatesh, Vice Chancellor, MAHE Manipal who was the guest of Honor expressed happiness about the service provided by the Center.

"Manipal Comprehensive Cancer Care Center has grown exponentially over the last five years. It has extremely competent cancer surgeons, radiation oncologist, medical oncologists, palliative medicine specialists and specialized nursing care. It is on its way to become Center of Excellence in the country," he said.

Dr Sharath Kumar Rao, Dean, KMC welcomed the gathering. Dr Avinash Shetty, Medical Superintendent proposed the vote of thanks.

Dr Naveena Kumar AN, Head- Department of Surgical Oncology gave an overview on Pancreatic Support group.
He said that all types of major and supra major pancreatic cancer surgeries including vascular resections and laparoscopic surgeries are being performed in the department.

ಸುದ್ದಿ

# ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ-ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ನ ಉದ್ಘಾಟನೆ

By Janardhan Kodavoor/Team karavalixpress, May 18, 2022




ಮಣಿಪಾಲ, 18ನೇ ಮೇ 2022 ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಮಾಹೆ ಮಣಿಪಾಲದ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗವು ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ನ ಉದ್ಘಾಟನೆ ಮತ್ತು ಮೇದೋಜ್ಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್‌ಗೆ ಬಹು-ಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ಆಯೋಜಿಸಿತ್ತು. ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾದ ವಿಶಾಖಪಟ್ಟಣದ ಹೋಮಿಭಾಭಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಡಾ.ಉಮೇಶ್ ಮಹಾಂತಶೆಟ್ಟಿ ಉದ್ಘಾಟಿಸಿದರು. ಅವರು ಮಾತನಾಡಿ, " ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕರಾವಳಿ ಕರ್ನಾಟಕ ಭಾಗದಲ್ಲಿ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ನಿರ್ವಹಣೆಯಲ್ಲಿ ಮುಂಚೂಣಿಯಲ್ಲಿದ್ದು , ದೇಶದ ಅಗ್ರ ಕ್ಯಾನ್ಸರ್ ಕೇಂದ್ರಗಳಲ್ಲಿ ಒಂದಾಗಿದೆ. ಟಾಟಾ ಮೆಮೋರಿಯಲ್ ಆಸ್ಪತ್ರೆ ಮುಂಬೈ 2008 ರಲ್ಲಿ pancreaticcancerindia.com ಅನ್ನು ಪ್ರಾರಂಭಿಸಿತು, ಇದು ಮೇದೋಜ್ಜೀರಕ ಗ್ರಂಥಿಗೆ ಸಂಭಂದಿಸಿದ ಕ್ಯಾನ್ಸರ್‌ಗಳಿಗೆ ಚಿಕಿತ್ಸೆ ನೀಡಲು, ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ನಿರ್ವಹಣೆಯನ್ನು ಕೇಂದ್ರೀಕರಿಸಲು ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್‌ಗಳ ಕುರಿತು ಅರಿವು ಮೂಡಿಸಲು ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಬೆಂಬಲ ಗುಂಪಿನ ಚಟುವಟಿಕೆಗಳನ್ನು ನಡೆಸಲು ಸಹಾಯ ಮಾಡಿತು" ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ಗೌರವ ಅತಿಥಿಗಳಾಗಿದ್ದ ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಮಾತನಾಡಿ, "ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕಳೆದ ಐದು ವರ್ಷಗಳಲ್ಲಿ ಅತ್ಯಂತ ಸಮರ್ಥ ಕ್ಯಾನ್ಸರ್ ಶಸ್ತ್ರಚಿಕಿತ್ಸಕರು, ರೇಡಿಯೋಥೆರಪಿ ಆಂಕೊಲಾಜಿಸ್ಟ, ವೈದ್ಯಕೀಯ ಆಂಕೊಲಾಜಿಸ್ಟ, ಉಪಶಾಮಕ ಔಷಧಿಗಳ ತಜ್ಞರೊಂದಿಗೆ ಸಮಗ್ರವಾಗಿದೆ. ಅಲ್ಲದೇ ಕೇಂದ್ರದಲ್ಲಿ ವಿಶೇಷ ತಜ್ಞ ಶುಶ್ರೂಷಾ ಆರೈಕೆಯನ್ನು ಒದಗಿಸಲಾಗುತ್ತಿದೆ ಮತ್ತು ಕೇಂದ್ರವು ದೇಶದ ಶ್ರೇಷ್ಠ ಕ್ಯಾನ್ಸರ್ ಕೇಂದ್ರವಾಗುವ ಹಾದಿಯಲ್ಲಿದೆ. ಭಾರತದಲ್ಲಿ ಪ್ರತಿ ವರ್ಷ 10000 ಕ್ಕೂ ಹೆಚ್ಚು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿವೆ. ಅವುಗಳಲ್ಲಿ ಶೇಕಡಾ 10 ರಿಂದ 20 ರಷ್ಟು ಮಾತ್ರ ಶಸ್ತ್ರಚಿಕಿತ್ಸೆಯಿಂದ ಗುಣಪಡಿಸಬಹುದಾಗಿದೆ. ಆದಾಗ್ಯೂ ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳು ಮತ್ತು ಸುಧಾರಿತ ವಿಕಿರಣ ಚಿಕಿತ್ಸೆಯ ತಂತ್ರಗಳೊಂದಿಗೆ ಹೆಚ್ಚು ಹೆಚ್ಚು ಪ್ರಕರಣಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿದೆ. 10 ವರ್ಷಗಳ ಹಿಂದೆ ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ಗೆ ಹೆಚ್ಚಾಗಿ ಉಪಶಮನಕಾರಿ ಔಷಧಿಯನ್ನು ಬಳಸಲಾಗುತಿತ್ತು. ಆದಾಗ್ಯೂ, ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳೊಂದಿಗೆ, ಸುಧಾರಿತ ಕೀಮೋಥೆರಪಿ ಮತ್ತು ವಿಕಿರಣ ಚಿಕಿತ್ಸೆಯ ತಂತ್ರಗಳು ಮತ್ತು ಕ್ಯಾನ್ಸರ್ ಆರೈಕೆಯ ಪುರಾವೆ ಆಧಾರಿತ ಅಭ್ಯಾಸವು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ಫಲಿತಾಂಶಗಳನ್ನು ಸುಧಾರಿಸಿದೆ" ಎಂದರು. ಕೆಎಂಸಿ ಡೀನ್ ಡಾ ಶರತ್ ಕುಮಾರ್ ರಾವ್ ಸ್ವಾಗತಿಸಿ, ವೈದ್ಯಕೀಯ ಅಧೀಕ್ಷಕ ಡಾ ಅವಿನಾಶ್ ಶೆಟ್ಟಿ ವಂದಿಸಿದರು. ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ ನವೀನ ಕುಮಾರ್ ಅವರು ಪ್ಯಾಂಕ್ರಿಯಾಟಿಕ್ ಸಪೋರ್ಟ್ ಗ್ರೂಪ್ ಮತ್ತು ಮೇದೋಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಬಹು-ಶಿಸ್ತಿನ ವಿಧಾನದ ಸಿ ಎಂ ಇ ಕುರಿತು ಅವಲೋಕನವನ್ನು ನೀಡಿ, "ಕ್ಯಾನ್ಸರ್ ಶಸ್ತ್ರ ಚಿಕಿತ್ಸಾ ವಿಭಾಗದಲ್ಲಿ ನಡೆಸಲಾಗುತ್ತಿರುವ ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆಗಳು ಸೇರಿದಂತೆ ಎಲ್ಲಾ ರೀತಿಯ ಪ್ರಮುಖ ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಗೆ ಸಂಭಂದಿಸಿದ ಶಸ್ತ್ರಚಿಕಿತ್ಸೆಗಳನ್ನು ನಡೆಸಲಾಗುತ್ತಿದೆ . ಈ ಹೊಸ ಉಪಕ್ರಮವು ಹೊಸದಾಗಿ ಪತ್ತೆಯಾದ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ರೋಗಿಗೆ ರೋಗನಿರ್ಣಯದಿಂದ ಹಿಡಿದು ಯಶಸ್ವಿ ಚಿಕಿತ್ಸೆಯ ಮೂಲಕ ಸಾಮಾನ್ಯ ಜೀವನವನ್ನು ನಡೆಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ಉಡುಪಿ Xpress

# ಮಾಹೆ: ಕ್ಯಾನ್ಸರ್‌ಗೆ ಬಹು-ಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ




ಮಣಿಪಾಲ: ಮೇ 18 ರಂದು ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಮಾಹೆ ಮಣಿಪಾಲದ ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗವು ಪ್ಯಾಂಕ್ರಿಯಾಟಿಕ್ ಕ್ಯಾನ್ಸರ್ ಸಪೋರ್ಟ್ ಗ್ರೂಪ್ ನ ಉದ್ಘಾಟನೆ ಮತ್ತು ಮೇದೋಜ್ಜೀರಕ ಗ್ರಂಥಿಗೆ ಸಂಬಂಧಿಸಿದ ಕ್ಯಾನ್ಸರ್‌ಗೆ ಬಹು-ಶಿಸ್ತಿನ ಚಿಕಿತ್ಸಾ ವಿಧಾನದ ಕುರಿತು ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ ಆಯೋಜಿಸಿತ್ತು.

ಮುಖ್ಯ ಅತಿಥಿಗಳಾದ ವಿಶಾಖಪಟ್ಟಣದ ಹೋಮಿಭಾಭಾ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಡಾ.ಉಮೇಶ್ ಮಹಾಂತಶೆಟ್ಟಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, "ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕರಾವಳಿ ಕರ್ನಾಟಕ ಭಾಗದಲ್ಲಿ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ನಿರ್ವಹಣೆಯಲ್ಲಿ ಮುಂಚೂಣಿಯಲ್ಲಿದ್ದು, ದೇಶದ ಅಗ್ರ ಕ್ಯಾನ್ಸರ್ ಕೇಂದ್ರಗಳಲ್ಲಿ ಒಂದಾಗಿದೆ. 2008 ರಲ್ಲಿ ಟಾಟಾ ಮೆಮೋರಿಯಲ್ ಆಸ್ಪತ್ರೆ ಮುಂಬೈನಲ್ಲಿ pancreaticcancerindia.com ಅನ್ನು ಪ್ರಾರಂಭಿಸಿತು, ಇದು ಮೇದೋಜ್ಜೀರಕ ಗ್ರಂಥಿಗೆ ಸಂಭಂದಿಸಿದ ಕ್ಯಾನ್ಸರ್‌ಗಳಿಗೆ ಚಿಕಿತ್ಸೆ ನೀಡಲು, ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ನಿರ್ವಹಣೆಯನ್ನು ಕೇಂದ್ರೀಕರಿಸಲು ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್‌ಗಳ ಕುರಿತು ಅರಿವು ಮೂಡಿಸಲು ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಬೆಂಬಲ ಗುಂಪಿನ ಚಟುವಟಿಕೆಗಳನ್ನು ನಡೆಸಲು ಸಹಾಯ ಮಾಡಿತು" ಎಂದು ಹೇಳಿದರು.




ಕಾರ್ಯಕ್ರಮದಲ್ಲಿ ಗೌರವ ಅತಿಥಿಗಳಾಗಿದ್ದ ಮಾಹೆ ಮಣಿಪಾಲದ ಉಪಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಮಾತನಾಡಿ,"ಮಣಿಪಾಲದ ಸಮಗ್ರ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವು ಕಳೆದ ಐದು ವರ್ಷಗಳಲ್ಲಿ ಅತ್ಯಂತ ಸಮರ್ಥ ಕ್ಯಾನ್ಸರ್ ಶಸ್ತ್ರಚಿಕಿತ್ಸಕರು, ರೇಡಿಯೋಥೆರಪಿ ಆಂಕೊಲಾಜಿಸ್ಟ್, ವೈದ್ಯಕೀಯ ಆಂಕೊಲಾಜಿಸ್ಟ್, ಉಪಶಾಮಕ ಔಷಧಿಗಳ ತಜ್ಞರೊಂದಿಗೆ ಸಮಗ್ರವಾಗಿದೆ. ಅಲ್ಲದೆ, ಕೇಂದ್ರದಲ್ಲಿ ತಜ್ಞ ಶುಶ್ರೂಷಾ ಆರೈಕೆಯನ್ನು ಒದಗಿಸಲಾಗುತ್ತಿದೆ ಮತ್ತು ಕೇಂದ್ರವು ದೇಶದ ಶ್ರೇಷ್ಠ ಕ್ಯಾನ್ಸರ್ ಕೇಂದ್ರವಾಗುವ ಹಾದಿಯಲ್ಲಿದೆ. ಭಾರತದಲ್ಲಿ ಪ್ರತಿ ವರ್ಷ 10000 ಕ್ಕೂ ಹೆಚ್ಚು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಪ್ರಕರಣಗಳು ಪತ್ತೆಯಾಗುತ್ತಿವೆ. ಅವುಗಳಲ್ಲಿ ಶೇಕಡಾ 10 ರಿಂದ 20 ರಷ್ಟು ಮಾತ್ರ ಶಸ್ತ್ರಚಿಕಿತ್ಸೆಯಿಂದ ಗುಣಪಡಿಸಬಹುದಾಗಿದೆ. ಅದಾಗ್ಯೂ ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳು ಮತ್ತು ಸುಧಾರಿತ ವಿಕಿರಣ ಚಿಕಿತ್ಸೆಯ ತಂತ್ರಗಳೊಂದಿಗೆ ಹೆಚ್ಚು ಹೆಚ್ಚು ಪ್ರಕರಣಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿದೆ.10 ವರ್ಷಗಳ ಹಿಂದೆ ಮೇದೋಜೀರಕ ಗ್ರಂಥಿಯ ಕ್ಯಾನ್ಸರ್ ಗೆ ಹೆಚ್ಚಾಗಿ ಉಪಶಮನಕಾರಿ ಔಷಧಿಯನ್ನು ಬಳಸಲಾಗುತಿತ್ತು. ಅದಾಗ್ಯೂ, ಶಸ್ತ್ರಚಿಕಿತ್ಸಾ ತಂತ್ರಗಳಲ್ಲಿನ ಪರಿಷ್ಕರಣೆಗಳೊಂದಿಗೆ, ಸುಧಾರಿತ ಕೀಮೋಥೆರಪಿ ಮತ್ತು ವಿಕಿರಣ ಚಿಕಿತ್ಸೆಯ ತಂತ್ರಗಳು ಮತ್ತು ಕ್ಯಾನ್ಸರ್ ಆರೈಕೆಯ ಪುರಾವೆ ಆಧಾರಿತ ಅಭ್ಯಾಸವು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಚಿಕಿತ್ಸಾ ಫಲಿತಾಂಶಗಳನ್ನು ಸುಧಾರಿಸಿದೆ" ಎಂದರು.

ಕೆಎಂಸಿ ಡೀನ್ ಡಾ ಶರತ್ ಕುಮಾರ್ ರಾವ್ ಸ್ವಾಗತಿಸಿ, ವೈದ್ಯಕೀಯ ಅಧೀಕ್ಷಕ ಡಾ ಅವಿನಾಶ್ ಶೆಟ್ಟಿ ವಂದಿಸಿದರು. ಕ್ಯಾನ್ಸರ್ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ ನವೀನ್ ಕುಮಾರ್ ಅವರು ಪ್ಯಾಂಕ್ರಿಯಾಟಿಕ್ ಸಪೋರ್ಟ್ ಗ್ರೂಪ್ ಮತ್ತು ಮೇದೋಜೀರಕ ಗ್ರಂಥಿಯ ಕ್ಯಾನ್ಸರ್‌ಗೆ ಬಹು-ಶಿಸ್ತಿನ ವಿಧಾನದ ಸಿ ಎಂ ಇ ಕುರಿತು ಅವಲೋಕನವನ್ನು ನೀಡಿ, ಕ್ಯಾನ್ಸರ್ ಶಸ್ತ್ರ ಚಿಕಿತ್ಸಾ ವಿಭಾಗದಲ್ಲಿ ನಡೆಸಲಾಗುತ್ತಿರುವ ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆಗಳು ಸೇರಿದಂತೆ ಎಲ್ಲಾ ರೀತಿಯ ಪ್ರಮುಖ ಮತ್ತು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ಗೆ ಸಂಭಂದಿಸಿದ ಶಸ್ತ್ರಚಿಕಿತ್ಸೆಗಳನ್ನು ನಡೆಸಲಾಗುತ್ತಿದೆ . ಈ ಹೊಸ ಉಪಕ್ರಮವು ಹೊಸದಾಗಿ ಪತ್ತೆಯಾದ ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್ ರೋಗಿಗೆ ರೋಗನಿರ್ಣಯದಿಂದ ಹಿಡಿದು ಯಶಸ್ವಿ ಚಿಕಿತ್ಸೆಯ ಮೂಲಕ ಸಾಮಾನ್ಯ ಜೀವನವನ್ನು ನಡೆಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.